**Bangalore**
**Regional News**
**14.02.2026 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

೧. ರಾಜ್ಯದ ೨ ಲಕ್ಷ ೨೦ ಸಾವಿರ ಕುಟುಂಬಗಳಿಗೆ ಭೂ-ಹಕ್ಕು ಪತ್ರ ವಿತರಣೆ ; ಭರವಸೆ ಈಡೇರಿಕೆಗೆ ಪ್ರಾಮಾಣಿಕ ಪ್ರಯತ್ನ - ಮುಖ್ಯಮಂತ್ರಿ ಸಿದ್ದರಾಮಯ್ಯ

೨. ಕೇಂದ್ರದ ವಿಶೇಷ ಅನುದಾನ ; ರಾಜ್ಯ ಸರ್ಕಾರದಿಂದ ನಿಯಮ ಬಾಹಿರ ಬಳಕೆ - ಬಿಜೆಪಿ ಆರೋಪ

೩. ಬಳ್ಳಾರಿ-ಹೊಸಪೇಟೆ ಮೂರನೇ ಹಾಗೂ ನಾಲ್ಕನೇ ರೈಲು ಮಾರ್ಗ ಯೋಜನೆಗೆ ಕೇಂದ್ರ ಸಂಪುಟ ಸಮಿತಿ ಒಪ್ಪಿಗೆ

೪. ಜನರಿಗೆ ಉತ್ತಮ ಮಾನಸಿಕ ಆರೋಗ್ಯ ಸೇವೆ ತಲುಪಿಸುವುದು ಅಗತ್ಯ - ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ್

**<><*<><>*><>**

ರಾಜ್ಯದ ೨ ಲಕ್ಷ ೨೦ ಸಾವಿರ ಕುಟುಂಬಗಳಿಗೆ ಹಕ್ಕು ಪತ್ರ ವಿತರಿಸುವ ಮೂಲಕ ತಾಂಡಾ, ಹಟ್ಟಿ, ಹಾಡಿ, ಗೊಲ್ಲರಹಟ್ಟಿ ಮುಂತಾದ ಅನಧಿಕೃತ, ದಾಖಲೆ ರಹಿತ ಜನವಸತಿಗಳನ್ನು ಕಂದಾಯ ಗ್ರಾಮಗಳಾಗಿ ಪರಿವರ್ತಿಸಿ, ಅಲ್ಲಿನ ಪ್ರತಿ ಕುಟುಂಬಕ್ಕೆ ಡಿಜಿಟಲ್ ಹಕ್ಕುಪತ್ರ ನೀಡುವ ಭೂ ಗ್ಯಾರಂಟಿ ಯೋಜನೆಯನ್ನು ರಾಜ್ಯ ಸರ್ಕಾರ ಜಾರಿಗೊಳಿಸಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಹಾವೇರಿಯ ಅಜ್ಜಯ್ಯನಗುಡಿ ಆವರಣದಲ್ಲಿಂದು ಜನ ಸೇವೆಯಲ್ಲಿ ಸಾರ್ಥಕ ಸಾವಿರ ದಿನ ಧ್ಯೇಯದೊಂದಿಗೆ ರಾಜ್ಯ ಸರ್ಕಾರದ ಸಾಧನಾ ಸಮಾವೇಶ ಹಾಗೂ ಭೂ ಗ್ಯಾರಂಟಿ ಸಮರ್ಪಣಾ ಸಮಾವೇಶವನ್ನು ಉದ್ಘಾಟಿಸಿ ಮಾತನಾಡಿದ ಅವರು, ಉಳಿದ ಕುಟುಂಬಗಳಿಗೆ ಶೀಘ್ರದಲ್ಲೇ ಹಕ್ಕು ಪತ್ರ ವಿತರಣೆಗೆ ಕ್ರಮವಹಿಸಲಾಗುತ್ತದೆ. ಚುನಾವಣೆಯ ಸಂದರ್ಭದಲ್ಲಿ ನೀಡಿದ ೫೯೦ ಭರವಸೆಗಳಲ್ಲಿ ಈಗಾಗಲೇ ೨೪೩ ಭರವಸೆಗಳನ್ನು ಈಡೆರಿಸಲಾಗಿದೆ. ಪ್ರಣಾಳಿಕೆಯಲ್ಲಿ ನೀಡಿದ ಎಲ್ಲಾ ಭರವಸೆಗಳನ್ನು ಈಡೇರಿಸುವ ಪ್ರಾಮಾಣಿಕ ಪ್ರಯತ್ನ ಮಾಡುವ ಮೂಲಕ ನಾವು ನುಡಿದಂತೆ ನಡೆಯಲಾಗಿದೆ. ಶಕ್ತಿ ಯೋಜನೆಯಿಂದ ತಲಾ ಆದಾಯದಲ್ಲಿ ರಾಜ್ಯ ದೇಶಗಳಲ್ಲಿಯೇ ಮೊದಲ ಸ್ಥಾನ ಪಡೆದಿದೆ. ಜಿಎಸ್‌ಟಿ ಸಂಗ್ರಹಣೆಯಲ್ಲಿ ಹೆಚ್ಚಳವಾಗಿದೆ. ೪ ಲಕ್ಷ ೫ ಸಾವಿರದ ರೂಪಾಯಿಗೂ ಅಧಿಕ ತೆರಿಗೆ ಕೇಂದ್ರ ಸರ್ಕಾರಕ್ಕೆ ರಾಜ್ಯದಿಂದ ಸಲ್ಲಿಕೆಯಾಗುತ್ತಿದೆ. ಬರುವ ಮಾರ್ಚ್ ೬ ರಂದು ರಾಜ್ಯ ಬಜೆಟ್ ಮಂಡನೆ ಮಾಡಲಾಗುತ್ತದೆ ಎಂದರು. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾತಾನಾಡಿ, ಕಾಂಗ್ರೆಸ್ ನೇತೃತ್ವದ ರಾಜ್ಯ ಸರ್ಕಾರ ನುಡಿದಂತೆ ನಡೆದಿದೆ. ಪ್ರತಿಯೊಬ್ಬರಿಗೂ ಕುಡಿಯಲು ಹಾಗೂ ಕೃಷಿಗೆ ನೀರು ಪುರೈಸುವ ನಿಟ್ಟಿನಲ್ಲಿ ನೀರಿನ ಗ್ಯಾರಂಟಿಯನ್ನು ಏಳನೇ ಗ್ಯಾರಂಟಿಯಾಗಿ ಜಾರಿಗೆ ತರಲಿದೆ. ಈಗಾಗಲೇ ಮೇಕೆದಾಟು ಯೋಜನೆಯ ಮರು ಡಿಪಿಆರ್ ಸಿದ್ದಗೊಳಿಸಲು ಸೂಚಿಸಲಾಗಿದೆ. ಕೇಂದ್ರ ಸರ್ಕಾರ ಅನುಮತಿ ನೀಡಿದ್ದಲ್ಲಿ ಚಿಕ್ಕಬಳ್ಳಾಪುರ ಹಾಗೂ ಕೋಲಾರ ಜಿಲ್ಲೆಗಳಿಗೆ ಶೀಘ್ರದಲ್ಲೇ ನೀರು ಪೂರೈಸಲು ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ತಿಳಿಸಿದರು. ಕಾರ್ಯಕ್ರಮದಲ್ಲಿ ಸಚಿವರಾದ ಡಾ.ಜಿ.ಪರಮೇಶ್ವರ್,

ಎಂ.ಬಿ.ಪಾಟೀಲ್, ಎಚ್.ಕೆ.ಪಾಟೀಲ್, ಶಿವರಾಜ್ ತಂಗಡಗಿ ಸೇರಿದಂತೆ ಶಾಸಕರು, ಮುಖಂಡರು ಹಾಗೂ ಅನೇಕ ಗಣ್ಯರು ಪಾಲ್ಗೊಂಡಿದ್ದರು.

<><*<><>*><>

ಕೇಂದ್ರ ಸರ್ಕಾರದಿಂದ ನಿರ್ದಿಷ್ಟ ಯೋಜನೆಗಳಿಗಾಗಿ ಬಿಡುಗಡೆಯಾದ ೧ ಸಾವಿರದ ೩೨೩.೯೬ ಕೋಟಿ ರೂಪಾಯಿ ವಿಶೇಷ ಅನುದಾನವನ್ನು ರಾಜ್ಯ ಕಾಂಗ್ರೆಸ್ ಸರ್ಕಾರವು ನಿಯಮಬಾಹಿರವಾಗಿ ಇತರೆ ಉದ್ದೇಶಗಳಿಗೆ ಬಳಸಿಕೊಂಡಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ೨೦೨೫ರ ಜುಲೈನಲ್ಲಿ ಮೂಲಸೌಕರ್ಯ ಹೂಡಿಕೆಗಾಗಿ ಬಿಡುಗಡೆಯಾಗಿದ್ದ ಈ ಮೊತ್ತವನ್ನು ಹಣಕಾಸು ಇಲಾಖೆಯ ಒತ್ತಡದ ಮೇರೆಗೆ ಬೇರೆಡೆಗೆ ವರ್ಗಾಯಿಸಲಾಗಿದೆ ಮತ್ತು ಕಾಮಗಾರಿ ಪೂರ್ಣಗೊಳ್ಳುವ ಮೊದಲೇ ನಕಲಿ 'ಬಳಕೆ ಪ್ರಮಾಣಪತ್ರ'ಗಳನ್ನು ಸಲ್ಲಿಸಲಾಗಿದೆ ಎಂದು ದೂರಿದರು. ಸಣ್ಣ ನೀರಾವರಿ ಮತ್ತು ಜಲ ನಿಗಮಗಳ ಮೂಲಕ ಈ ಅವ್ಯವಹಾರ ನಡೆದಿದೆ ಎಂದು ಸಂಶಯ ವ್ಯಕ್ತಪಡಿಸಿದ ಅವರು, ಹಣಕಾಸು ಖಾತೆಯನ್ನು ಹೊಂದಿರುವ ಮುಖ್ಯಮಂತ್ರಿಯವರು ಈ ಕುರಿತು ತಕ್ಷಣವೇ ಸ್ಪಷ್ಟನೆ ನೀಡಬೇಕು ಎಂದು ಆಗ್ರಹಿಸಿದರು. ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣ ಹಾಗೂ ಗೃಹಲಕ್ಷ್ಮಿ ಯೋಜನೆಗೆ ಸಂಬಂಧಪಟ್ಟ ೫ ಸಾವಿರ ಕೋಟಿ ರೂಪಾಯಿ ಅನುದಾನದ ಬಳಕೆಯ ಬಗ್ಗೆಯೂ ಸರ್ಕಾರವು ಪಾರದರ್ಶಕತೆ ಕಾಯ್ದುಕೊಳ್ಳುತ್ತಿಲ್ಲ ಎಂದು ವಿಜಯೇಂದ್ರ ಟೀಕಿಸಿದರು. ೧೩೨ ಕೋಟಿ ರೂಪಾಯಿ ಅನುದಾನ ಇನ್ನೂ ಬಿಡುಗಡೆಯಾಗದಿದ್ದರೂ ಬಳಕೆ ಪ್ರಮಾಣಪತ್ರ ಸಲ್ಲಿಸಿರುವುದು ಆಡಳಿತಾತ್ಮಕ ಲೋಪಕ್ಕೆ ಸಾಕ್ಷಿಯಾಗಿದೆ ಎಂದು ಆರೋಪಿಸಿದ ಅವರು, ಸರ್ಕಾರದ ಹಣಕಾಸು ನಿರ್ವಹಣೆಯ ಬಗ್ಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ಪತ್ರಿಕಾಗೋಷ್ಠಿಯಲ್ಲಿ ಮಾಜಿ ಉಪ ಮುಖ್ಯಮಂತ್ರಿಗಳಾದ ಗೋವಿಂದ ಕಾರಜೋಳ ಹಾಗೂ ಡಾ. ಸಿ.ಎನ್. ಅಶ್ವತ್ಥನಾರಾಯಣ ಉಪಸ್ಥಿತರಿದ್ದರು.

<><*<><>*><>

ಕರ್ನಾಟಕ, ದೆಹಲಿ, ಹರಿಯಾಣ, ಮಹಾರಾಷ್ಟ್ರ ರಾಜ್ಯಗಳ ೧೨ ಜಿಲ್ಲೆಗಳಲ್ಲಿ ರೈಲ್ವೆ ಜಾಲಗಳನ್ನು ಸುಮಾರು ೩೮೯ ಕಿಲೋಮೀಟರ್‌ಗಳಷ್ಟು ವಿಸ್ತರಿಸುವ ಮೂರು ಬಹುಮಾರ್ಗದ ಯೋಜನೆಗಳಿಗೆ ಆರ್ಥಿಕ ವ್ಯವಹಾರ ಕುರಿತಾದ ಕೇಂದ್ರ ಸಂಪುಟ ಸಮಿತಿ ಒಪ್ಪಿಗೆ ನೀಡಿದೆ. ಬಳ್ಳಾರಿ-ಹೊಸಪೇಟೆ ಮೂರು ಮತ್ತು ನಾಲ್ಕನೇ ಮಾರ್ಗ ಕೂಡ ಇದರಲ್ಲಿ ಸೇರಿದೆ.

<><*<><>*><>

ಬೆಂಗಳೂರಿನ ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನ ಸಂಸ್ಥೆ -ನಿಮ್ಹಾನ್ಸ್ ಇಂದು ತನ್ನ 'ಸಂಸ್ಥಾಪನಾ ದಿನ'ವನ್ನು ಸಡಗರದಿಂದ ಆಚರಿಸಿತು. ನಿಮ್ಹಾನ್ಸ್ ಕನ್ವೆನ್ಷನ್ ಸೆಂಟರ್‌ನಲ್ಲಿ ನಡೆದ ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ನಿಮ್ಹಾನ್ಸ್ ನಿರ್ದೇಶಕಿ ಡಾ.ಪ್ರತಿಮಾ ಮೂರ್ತಿ ಸಂಸ್ಥೆಯ ವಾರ್ಷಿಕ ವರದಿ ಮಂಡಿಸಿ, ಚಿಕಿತ್ಸೆ ಮತ್ತು ಸಂಶೋಧನೆಯಲ್ಲಿನ ಪ್ರಗತಿಯನ್ನು ವಿವರಿಸಿದರು. ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ್, ವೈದ್ಯಕೀಯ ಸೇವೆಯಲ್ಲಿ ನೈತಿಕತೆ ಮತ್ತು ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಉತ್ತಮ ಮಾನಸಿಕ ಆರೋಗ್ಯ ಸೇವೆ ತಲುಪಿಸುವ ಅಗತ್ಯತೆಯನ್ನು ಒತ್ತಿ ಹೇಳಿದರು. ಇದೇ ಸಂದರ್ಭದಲ್ಲಿ ಸಂಸ್ಥೆಯ ಅಭಿವೃದ್ಧಿಗೆ ಶ್ರಮಿಸಿದ ಗಣ್ಯರಿಗೆ 'ವಿಶಿಷ್ಟ ಸೇವಾ ಪ್ರಶಸ್ತಿ'ಗಳನ್ನು ನೀಡಿ ಗೌರವಿಸಲಾಯಿತು ಮತ್ತು ನಿಮ್ಹಾನ್ಸ್ ಜಿಮ್ಖಾನಾ ಆಯೋಜಿಸಿದ್ದ ವಿವಿಧ ಕ್ರೀಡಾ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳ ವಿಜೇತರಿಗೆ ಬಹುಮಾನಗಳನ್ನು ವಿತರಿಸಲಾಯಿತು. ಸಾರ್ವಜನಿಕರಲ್ಲಿ ಆರೋಗ್ಯ ಜಾಗೃತಿ ಮೂಡಿಸುವ

ಉದ್ದೇಶದಿಂದ ಹೊಸ ಐಇಸಿ ಸಾಮಗ್ರಿಗಳನ್ನು ಬಿಡುಗಡೆ ಮಾಡಿದ ಗಣ್ಯರು, ಸಂಸ್ಥೆಯ ಶಿಸ್ತುಬದ್ಧ ಕಾರ್ಯವೈಖರಿಯನ್ನು ಅಭಿನಂದಿಸಿದರು.

**<><*<><>*><>**

ಮಂಡ್ಯ ಜಿಲ್ಲೆ ಮದ್ದೂರು ಪುರಸಭೆಯನ್ನು ನಗರಸಭೆಯಾಗಿ ಮೇಲ್ದರ್ಜೆಗೇರಿಸುವ ಸಲುವಾಗಿ ನಗರಸಭೆಗೆ ಕೆಲವು ಗ್ರಾಮ ಪಂಚಾಯತಿಗಳ ಸೇರ್ಪಡೆ ಸಂಬಂಧ ಸರ್ಕಾರದ ಹಂತದಲ್ಲಿ ಮಾತನಾಡಿ ಕ್ರಮ ವಹಿಸಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಹೇಳಿದ್ದಾರೆ. ಮದ್ದೂರು ತಾಲ್ಲೂಕಿನ ಗೆಜ್ಜಲಗೆರೆ ಗ್ರಾಮ ಪಂಚಾಯಿತಿಯನ್ನು ನಗರಸಭೆಯನ್ನಾಗಿ ಮೇಲ್ದರ್ಜೆಗೇರಿಸುವ ಕುರಿತು ಇಂದು ಗ್ರಾಮಸ್ಥರೊಂದಿಗೆ ಮದ್ದೂರು ಪ್ರವಾಸಿ ಮಂದಿರದಲ್ಲಿ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪುರಸಭೆಯನ್ನು ನಗರಸಭೆ ಮಾಡಲು ಮದ್ದೂರು ತಾಲ್ಲೂಕಿನ ನಾಲ್ಕು ಗ್ರಾಮ ಪಂಚಾಯಿತಿಗಳಾದ ಗೊರವನಹಳ್ಳಿ, ಚಾಮನಹಳ್ಳಿ, ಸೋಮನಹಳ್ಳಿ ಹಾಗೂ ಗೆಜ್ಜಲಗೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯನ್ನು ನಗರಸಭೆಗೆ ಸೇರಿಕೊಳ್ಳುವ ಪ್ರಕ್ರಿಯೆ ಬಗ್ಗೆ ಕಾನೂನಿನ ಅನ್ವಯ ಕ್ರಮ ಕೈಕೊಳ್ಳಲಾಗುವುದು. ಗ್ರಾಮಸ್ಥರ ಬೇಡಿಕೆಗಳನ್ನು ಅಧಿಕಾರಿಗಳ ಜೊತೆ ಸಭೆ ನೆಡಸಿ ಶೀಘ್ರದಲ್ಲೇ ಪರಿಶೀಲಿಸಲಾಗುವುದು ಎಂದು ತಿಳಿಸಿದರು.

**<><*<><>*><>**

ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ಇಂದು ಬೃಹತ್ ಪ್ರಮಾಣದ ಸಂಘಟನೆಯಾಗಿದ್ದು, ೫೫ ವರ್ಷಗಳನ್ನು ಪೂರೈಸಿರುವುದರಿಂದ ರಾಜ್ಯಮಟ್ಟದ ಶೈಕ್ಷಣಿಕ ಮಹಾ ಸಮ್ಮೇಳನವನ್ನು ಇದೇ ೨೮ ರಂದು ಬೆಂಗಳೂರಿನ ಅರಮನೆ ಮೈದಾನದಲ್ಲಿ ಮಹಾ ಸಮ್ಮೇಳನ, ಧನ್ಯತಾ ಸಮಾರಂಭ, ಸುವರ್ಣ ಮಹೋತ್ಸವ ಹಾಗೂ ಗುರುವಂದನಾ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ರಮೇಶ್ ಹೇಳಿದ್ದಾರೆ. ನಗರದ ಗುರುಭವನದಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ಧರಾಮಯ್ಯ, ಶಿಕ್ಷಣ ಸಚಿವ ಮಧು ಬಂಗಾರಪ್ಪ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೇರಿದಂತೆ ಹಲವು ಗಣ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ ಎಂದಿದ್ದಾರೆ. ಶಾಲೆಗಳಿಗೆ ಉಚಿತ ವಿದ್ಯುತ್, ನೀರಿನ ಸಂಪರ್ಕ, ಮಹಿಳಾ ಶಿಕ್ಷಕರಿಗೆ ಮಾಸಿಕ ಋತುಚಕ್ರ ರಜೆ, ಶೈಕ್ಷಣಿಕ ಆರ್ಥಿಕ ಸಮೀಕ್ಷೆಯಲ್ಲಿ ಆಕಸ್ಮಿಕ ಮರಣ ಹೊಂದಿದವರಿಗೆ ೨೦ ಲಕ್ಷ ಪರಿಹಾರ, ೪೫ ಸಾವಿರ ಶಿಕ್ಷಕರಿಗೆ ವರ್ಗಾವಣೆ ಭಾಗ್ಯ ಸೇರಿದಂತೆ ಹಲವಾರು ಬೇಡಿಕೆಗಳನ್ನು ರಾಜ್ಯ ಸರ್ಕಾರ ಈಡೇರಿಸಿದೆ ಎಂದರು. ಕಾರ್ಯಕ್ರಮದ ವೇಳೆ ಪ್ರತಿ ಜಿಲ್ಲೆಯ ಒರ್ವ ಮಹಿಳಾ ಶಿಕ್ಷಕಿಗೆ ಸಾವಿತ್ರಿಬಾಯಿ ಫುಲೆ, ಒರ್ವ ಶಿಕ್ಷಕರಿಗೆ ಜ್ಯೋತಿಬಾ ಫುಲೆ ಪ್ರಶಸ್ತಿ ನೀಡಿ ಗೌರವಸಲಾಗುತ್ತಿದೆ ಎಂದು ಮಾಹಿತಿ ನೀಡಿದರು.

**<><*<><>*><>**

ಅವಧೂತ ದತ್ತಪೀಠದ ವತಿಯಿಂದ ಮೈಸೂರು ನಗರದ ಮಹಾರಾಜ ಕಾಲೇಜು ಮೈದಾನದಲ್ಲಿ ಆಯೋಜಿಸಿದ್ದ ಬೃಹತ್ ಸಾಮೂಹಿಕ 'ಹನುಮಾನ್ ಚಾಲೀಸಾ ಪಾರಾಯಣ ಮಹಾಯಜ್ಞ' ಇಂದು ಶ್ರದ್ಧೆ, ಭಕ್ತಿಭಾವದಿಂದ ನೆರವೇರಿತು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**